ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದಲ್ಲಿ ಶಾಲಾ ಕಾಲೇಜುಗಳನ್ನು ಆರಂಭಿಸುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) -

90(676) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೋವಿಡ್ ಹಿನ್ನೆಲೆಯಲ್ಲಿ ಶಾಲಾ ಕಾಲೇಜುಗಳು ಆರಂಭವಾಗದೇ ಮಕ್ಕಳ ಶೈಕ್ಷಣಿಕ ಚಟುವಟಿಕೆ ಹಾಗೂ ವ್ಯಕ್ತಿತ್ವದ ಮೇಲೆ ಪರಿಣಾಮ ಬೀರುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಶಾಲೆಗಳು ಆರಂಭವಾಗದೇ ಇರುವ ಕಾರಣಕ್ಕೆ ಮಕ್ಕಳು, ಕುಟುಂಬ ಹಾಗೂ ಸಮಾಜದ ಮೇಲೆ ಆಗುವ ದುಷ್ಪರಿಣಾಮದ ಕುರಿತು ಅಧ್ಯಯನ ಸಮಿತಿಯನ್ನು ರಚಿಸಿದೆಯೇ; ರಚಿಸಿದ್ದಲ್ಲಿ ಅವರ ಅಭಿಪ್ರಾಯ ಏನು; ರಚಿಸದಿದ್ದಲ್ಲಿ, ಸಲಹೆಗಳನ್ನು ಪಡೆಯಲು ಪ್ರಯತ್ನ ಹಾಗೂ ಈ ನಿಟ್ಟಿನಲ್ಲಿ ಸರ್ಕಾರದ ಕಾರ್ಯಯೋಜನೆ ಏನು;

(ಇ) ಕುಟುಂಬ, ಸಮಾಜ ಹಾಗೂ ಮಕ್ಕಳ ಮೇಲೆ ಪರಿಣಾಮ ಆಗದೇ ಇರುವ ರೀತಿಯಲ್ಲಿ ಹಾಗೂ ಆಗಿರುವ ಪರಿಣಾಮವನ್ನು ಸರಿಪಡಿಸುವ ದೃಷ್ಠಿಯಿಂದ ಸರ್ಕಾರದ ಕ್ರಮವೇನು;

(ಈ) ಜೊತೆಗೆ ಪದವಿ ಪೂರ್ವ ಕಾಲೇಜುಗಳ ಪುನರಾರಂಭ ಹಾಗೂ ಬೋಧನೆ ಕುರಿತು ಸರ್ಕಾರದ ಕ್ರಮ ಏನು; ನೀಟ್, ಜೆಇಇ ತರಹದ ಪರೀಕ್ಷೆಗಳು ಈ ಬಾರಿ ನಡೆಯುವ ಮಾಹಿತಿ ಇದೆಯೇ; ಕರ್ನಾಟಕ ರಾಜ್ಯ ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಈ ನಿಟ್ಟಿನಲ್ಲಿ ಸರ್ಕಾರ ತಯಾರಿ ಕೈಗೊಂಡಿದೆಯೇ; ದೇಶದ ಬೇರೆ ರಾಜ್ಯಗಳಲ್ಲಿ ಶಾಲಾರಂಭವಾಗಿದ್ದು, ರಾಜ್ಯದಲ್ಲಿ ಆಗದೇ ಇರುವುದರಿಂದ ಆಗುವ ಪರಿಣಾಮಗಳೇನು?